ಕರ್ನಾಟಕ ಸರ್ಕಾರ

ಇ-ಕಛೇರಿ ಸಂ: ಇಡಿ 120 ಯುಜಿಬಿ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:26.04.2021

ಇಂದ

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ

ಕುಲಸಚಿವರು,
ಬೆಂಗಳೂರು ನಗರ ವಿಶ್ವವಿದ್ಯಾಲಯ,
ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು.

ಮಾನ್ಯರೇ,

ವಿಷಯ: ಬೆಂಗಳೂರು ನಗರ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಸಾಯಿ ವಿದ್ಯಾ ಪ್ರಥಮ ದರ್ಜೆ ಕಾಲೇಜನ್ನು 2020-21ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಆರಂಭಿಸಲು ಸಂಯೋಜನೆ ನೀಡುವ ಬಗ್ಗೆ..

ಉಲ್ಲೇಖ:- 1.ಸರ್ಕಾರದ ಆದೇಶ ಸಂಖ್ಯೆ:ಇಡಿ 29 ಯುಎನ್ಇ 2021, ದಿನಾಂಕ:12.022021
2.ತಮ್ಮ ಪತ್ರ ಸಂಖ್ಯೆ: ಬಿಸಿಯು/ಎಸಿಎ-ಸಂಯೋಜನೆ/468/2020-21, ದಿ:19.03.2021

*****

ಸಾಯಿ ವಿದ್ಯಾ ಪ್ರಥಮ ದರ್ಜೆ ಕಾಲೇಜನ್ನು ರಾಜನಕುಂಟೆ, ಬೆಂಗಳೂರು ಇಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಆರಂಭಿಸಲು ಸಂಯೋಜನೆ ನೀಡುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59ರಲ್ಲಿ ಗೊತ್ತುಪಡಿಸಲಾದ ಪ್ರಕ್ರಿಯೆಯನ್ನು ಉಲ್ಲೇಖ(1)ರ ಆದೇಶದಲ್ಲಿನ ಸಂಯೋಜನಾ ಮಾರ್ಗಸೂಚಿಗಳನ್ನು ಅನುಸರಿಸಿ ಆನ್‌ಲೈನ್ ವ್ಯವಸ್ಥೆಯಡಿ ಜರುಗಿಸಿದ ತರುವಾಯ ಪೂರ್ವೋಕ್ತ ಅಧಿನಿಯಮದ ಪ್ರಕರಣ 59(11)ರಡಿ ಅವಶ್ಯಕವಾದ ಸರ್ಕಾರದ ಶಿಫಾರಸ್ಸು ಕೋರಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾ ವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ ಉಲ್ಲೇಖ(2)ರ ಪತ್ರದನ್ವಯ ಆನ್‌ಲೈನ್ ಮಾರ್ಗದಲ್ಲಿ ಸಲ್ಲಿಸಲಾದ ಪ್ರಸ್ತಾವನೆಯನ್ನು ಕೂಲಂಕಷವಾಗಿ ಸಂವೀಕ್ಷಿಸಲಾಗಿದೆ.

ವಿವಿಧ ಸ್ವರೂಪಗಳ ಸಂಯೋಜನೆಗಾಗಿ ಸರ್ಕಾರದ ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ:12.02.2021ರಲ್ಲಿ ಗೊತ್ತುಪಡಿಸಿದ ಪರಿಮಾಣಿತ ನಿಯತಾಂಕಗಳ ಪರಿಪಾಲನೆ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಯ ಕುರಿತು ಮೌಲ್ಯೀಕರಣ ನಡೆಸಿ ಸ್ಥಳೀಯ ವಿಚಾರಣೆ ಸಮಿತಿಯು ಸಲ್ಲಿಸಿದ ವರದಿಯಲ್ಲಿನ ನಿರ್ಣಯಗಳು ಹಾಗೂ ಬೆಂಗಳೂರು ನಗರ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು

--2

Scanned with CamScanner

ಅನುಸರಿಸಿ, ಸಾಯಿ ವಿದ್ಯಾ ಪ್ರಥಮ ದರ್ಜೆ ಕಾಲೇಜು, ರಾಜನಕುಂಟೆ, ಬೆಂಗಳೂರು ಇಲ್ಲಿ ಕೆಳಕಂಡಂತೆ ಸ್ನಾತ್ತಕ ವ್ಯಾಸಂಗಕ್ರಮಗಳೊಂದಿಗೆ 2020-21ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಆರಂಭಿಸಲು ಸಂಯೋಜನೆ ನೀಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ವ್ಯಾಸಂಗಕ್ರಮ | ವಿಷಯಸಮೂಹ | ವಿದ್ಯಾರ್ಥಿಪ್ರಮಾಣ |
|---|---|---|
| ಬಿ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಗಳಂತೆ | 60(ಅರವತ್ತು) |
| ಬಿ.ಕಾಂ | ವಿಶ್ವವಿದ್ಯಾಲಯದ ಪರಿನಿಯಮಗಳಂತೆ | 100(ನೂರು) |

ಹೊಸ ಸಂಯೋಜನೆಗೆ ಅಗತ್ಯವಾಗುವ ಕರಾರು ಒಪ್ಪಂದದ ಮುಚ್ಚಳಿಕೆಯನ್ನು ದಿನಾಂಕ:22.04.2021ರಂದು ಕಡ್ಡಾಯವಾಗಿ ಎಂ.ವಿ.ಎಂ. ಎಜುಕೇಷನಲ್ ಟ್ರಸ್ಟ್ ನಿದಮ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಸಾಯಿ ವಿದ್ಯಾ ಪ್ರಥಮ ದರ್ಜೆ ಕಾಲೇಜಿಗೆ 2020-21ನೇ ಶೈಕ್ಷಣಿಕ ಸಾಲಿನಿಂದ ಹೊಸ ಸಂಯೋಜನೆ ನೀಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಹೊಸ ಸಂಯೋಜನೆಯ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1 ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2 ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

3 ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4 ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5 ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

6 ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

7 ದಿನಾಂಕ: 13-8-1997 ರಂದು ವಿಶಾಖ V/S ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

3....

Scanned with CamScanner

8 ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

9 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ

Mahesh

26/4/2021

**(ಮಹೇಶ್. ಆರ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2)

ಪ್ರತಿ : -

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಅಧ್ಯಕ್ಷರು, ಶ್ರೀ ಸಾಯಿ ವಿದ್ಯಾ ವಿಕಾಸ ಶಿಕ್ಷಣ ಸಮಿತಿ, ರಾಜನಕುಂಟೆ, ಬೆಂಗಳೂರು.

Scanned with CamScanner